**Akashvani : Bangalore**
**National Bulletin In Kannada**
**17.11.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.11.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಅಬುಜಾದಲ್ಲಿಂದು ನೈಜಿರಿಯಾ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ

೨. ಜಗತ್ತಿನ ಬಲಿಷ್ಠ ರಾಷ್ಟ್ರವಾಗಿ ಭಾರತ ಅಭಿವೃದ್ಧಿಗೊಳ್ಳುತ್ತಿದೆ; ಉಪರಾಷ್ಟ್ರಪತಿ

೩. ಭಾರತದ ಜಿಸ್ಯಾಟ್-೨೦ ಸಂವಹನ ಉಪಗ್ರಹ ಉಡಾವಣೆ ನಡೆಸಲಿರುವ ಸ್ಪೇಸ್ ಎಕ್ಸ್

೪. ಮಹಿಳಾ ಏಷ್ಯನ್ ಹಾಕಿ ಚಾಂಪಿಯನ್ಸ್ ಟ್ರೋಫಿ; ಭಾರತ - ಜಪಾನ್ ತಂಡಗಳ ನಡುವೆ ಇಂದು ಹಣಾಹಣಿ

**<><*<><>*><>**

ಮೂರು ದೇಶಗಳ ಭೇಟಿಯ ಮೊದಲ ಚರಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ನೈಜೀರಿಯಾಗೆ ತಲುಪುತಿದ್ದಂತೆಯೇ ಪಶ್ಚಿಮ ಆಫ್ರಿಕಾದಲ್ಲಿರುವ ಭಾರತೀಯ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಅವರಿಗೆ ಅದ್ದೂರಿ ಸ್ವಾಗತ ಕೋರಿದರು. ಅಬುಜಾ ವಿಮಾನ ನಿಲ್ದಾಣದಲ್ಲಿ 'ಭಾರತ್ ಮಾತಾ ಕಿ ಜೈ ' ಮತ್ತು 'ವಂದೇ ಮಾತರಂ' ಎಂಬ ಘೋಷಣೆ ಕೂಗಿದರು.

**<><*<><>*><>**

ಮೂರು ದೇಶಗಳ ಭೇಟಿಯ ಮೊದಲ ಚರಣದಲ್ಲಿ ನೈಜೀರಿಯಾ ತಲುಪಿರುವ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ರಾಜಧಾನಿ ಅಬುಜಾದಲ್ಲಿ ಅಲ್ಲಿನ ದೇಶದ ಅಧ್ಯಕ್ಷ ಬೋಲಾ ಅಹ್ಮದ್ ಟಿನುಬು ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಎರಡು ದಿನಗಳ ನೈಜೀರಿಯಾ ಭೇಟಿಗಾಗಿ ಪ್ರಧಾನಿ ಮೋದಿ ಅವರು ಕಳೆದ ರಾತ್ರಿ ಅಬುಜಾ ತಲುಪಿದರು. ೧೭ ವರ್ಷಗಳ ನಂತರ ಭಾರತದ ಪ್ರಧಾನಿಯೊಬ್ಬರು ನೈಜೀರಿಯಾಕ್ಕೆ ಭೇಟಿ ನೀಡುತ್ತಿರುವುದು ಇದೇ ಮೊದಲು. ಪ್ರಧಾನಿ ಮೋದಿ ಹಾಗೂ ಅಧ್ಯಕ್ಷ ಟಿನುಬು ಅವರು ಉಭಯ ದೇಶಗಳ ನಡುವಿನ ಕಾರ್ಯತಂತ್ರ ಪಾಲುದಾರಿಕೆಯನ್ನು ಪರಾಮರ್ಶಿಸಲಿದ್ದು, ದ್ವಿಪಕ್ಷೀಯ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ಮಾರ್ಗೋಪಾಯಗಳ ಕುರಿತು ಚರ್ಚಿಸಲಿದ್ದಾರೆ. ಮಾತುಕತೆಯ ನಂತರ ಹಲವು ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆಯಿದೆ. ಪ್ರಧಾನಿ ಮೋದಿ ಅವರು ನೈಜೀರಿಯಾದಲ್ಲಿ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಭಾರತ ಮತ್ತು ನೈಜೀರಿಯಾ ೨೦೦೭ ರಿಂದ ಆರ್ಥಿಕ, ಇಂಧನ ಮತ್ತು ರಕ್ಷಣಾ ಸಹಯೋಗದೊಂದಿಗೆ ಕಾರ್ಯತಂತ್ರದ ಪಾಲುದಾರ ದೇಶಗಳಾಗಿವೆ.

ನೈಜೀರಿಯಾದಲ್ಲಿನ ಪ್ರಮುಖ ವಲಯಗಳಲ್ಲಿ ೨೦೦ ಕ್ಕೂ ಹೆಚ್ಚು ಭಾರತೀಯ ಕಂಪನಿಗಳು ೨೭ ಶತಕೋಟಿ ಡಾಲರ್‌ಗೂ ಹೆಚ್ಚು ಹೂಡಿಕೆ ಮಾಡಿವೆ. ಎರಡೂ ದೇಶಗಳು ಬಲಿಷ್ಟ ಅಭಿವೃದ್ಧಿ ಸಹಕಾರ ಪಾಲುದಾರಿಕೆಯನ್ನು ಸಹ ಹಂಚಿಕೊಂಡಿವೆ. ನೈಜೀರಿಯಾ ಅಧ್ಯಕ್ಷರು ಕಳೆದ ವರ್ಷ ಜಿ- ೨೦ ಶೃಂಗಸಭೆಗಾಗಿ ಭಾರತಕ್ಕೆ ಭೇಟಿ ನೀಡಿದ್ದರು. ನೈಜೀರಿಯಾ ಆಫ್ರಿಕಾದಲ್ಲಿ ಬಹಳ ದೊಡ್ಡ ಆರ್ಥಿಕತೆಯಾಗಿದೆ. ಭಾರತ ಮತ್ತು ನೈಜೀರಿಯಾ ಎರಡೂ ಬಹು-ಧಾರ್ಮಿಕ, ಬಹು-ಜನಾಂಗೀಯ ಮತ್ತು ಬಹು-ಭಾಷಾ ದೇಶಗಳಾಗಿವೆ. ನೈಜೀರಿಯಾ ಕೂಡ ಬ್ರಿಕ್ಸ್‌ನ ಪಾಲುದಾರ ರಾಷ್ಟ್ರವಾಗಿದೆ. ದೇಶದಲ್ಲಿ ಭಾರತೀಯ ವಲಸಿಗರು ೬೦ ಸಾವಿರದಷ್ಟಿದ್ದು, ಪಶ್ಚಿಮ ಆಫ್ರಿಕಾದಲ್ಲಿ ಅತಿ ದೊಡ್ಡ ಸಮುದಾಯವಾಗಿದೆ ಎಂದು ನಮ್ಮ ಬಾತ್ಮಿದಾರರು ವರದಿಮಾಡಿದ್ದಾರೆ.ಬ್ರೆಜಿಲ್ ಅಧ್ಯಕ್ಷ ಲೂಯಿಸ್ ಇನಾಸಿಯೊ ಲುಲಾ ಡಾ ಸಿಲ್ವಾ ಅವರು ಆಯೋಜಿಸಿರುವ ಜಿ- ೨೦ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಪ್ರಧಾನಿ ಮೋದಿ ನೈಜೀರಿಯಾದಿಂದ ನಾಳೆ ಬ್ರೆಜಿಲ್‌ನ ರಿಯೊ ಡಿ ಜನ್ಯೆರೊಗೆ ಪ್ರಯಾಣಿಸಲಿದ್ದಾರೆ. ಭಾರತ, ಬ್ರೆಜಿಲ್ ಮತ್ತು ದಕ್ಷಿಣ ಆಫ್ರಿಕಾದೊಂದಿಗೆ ಜಿ- ೨೦ ಟ್ರೋಕಾದ ಭಾಗವಾಗಿದ್ದು, ಶೃಂಗಸಭೆಯ ಚರ್ಚೆಗಳಿಗೆ ಸಕ್ರಿಯವಾಗಿ ಕೊಡುಗೆ ನೀಡುತ್ತಿದೆ. ಶೃಂಗಸಭೆಯಲ್ಲಿ ಪ್ರಧಾನಿ ಮೋದಿ ಅವರು ವಿವಿಧ ಜಾಗತಿಕ ಸಮಸ್ಯೆಗಳ ಕುರಿತು ಭಾರತದ ನಿಲುವುಗಳನ್ನು ಸ್ಪಷ್ಟಪಡಿಸಲಿದ್ದಾರೆ. ಜಿ ೨೦ ಶೃಂಗಸಭೆಯ ಸಂದರ್ಭದಲ್ಲಿ ಮೋದಿ ಅವರು ಹಲವಾರು ನಾಯಕರನ್ನು ಭೇಟಿ ಮಾಡುವ ನಿರೀಕ್ಷೆಯಿದೆ. ಮೂರನೇ ಮತ್ತು ಅಂತಿಮ ಚರಣದಲ್ಲಿ ಪ್ರಧಾನಿ ಮೋದಿ ಅವರು ನವೆಂಬರ್ ೧೯ ರಿಂದ ೨೧ ರವರೆಗೆ ಗಯಾನಾಗೆ ಪ್ರವಾಸ ಕೈಗೊಳ್ಳಲಿದ್ದಾರೆ.

<><*<><>*><>

ಏಕ್ ಪೇಡ್ ಮಾ ಕೆ ನಾಮ್ ಅಭಿಯಾನವನ್ನು ಬೆಂಬಲಿಸಿ ಯಶಸ್ಸಿಗೆ ಕಾರಣರಾದ ಎಲ್ಲರಿಗೂ ಪ್ರಧಾನಿ ನರೇಂದ್ರ ಮೋದಿ ಕೃತಜ್ಞತೆ ಸಲ್ಲಿಸಿದ್ದಾರೆ. ಈ ಸಂಬಂಧ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರತಿಕ್ರಿಯಿಸಿರುವ ಮೋದಿ ಹೆಚ್ಚಿನ ಜನರು ತಮ್ಮ ತಾಯಿಯ ಗೌರವಾರ್ಥವಾಗಿ ಸಸಿಯನ್ನು ನೆಡುವಂತೆ ಆ ಮೂಲಕ ಸುಸ್ಥಿರ ಭೂ ಗ್ರಹಕ್ಕೆ ಕೊಡುಗೆ ನೀಡುವಂತೆ ಮನವಿ ಮಾಡಿದ್ದಾರೆ.

<><*<><>*><>

ಸ್ವಾತಂತ್ರ್ಯ ಅಮೃತೋತ್ಸವದ ಸಂದರ್ಭದಲ್ಲಿ ಭಾರತ ಅಭಿವೃದ್ಧಿಯತ್ತ ಮುನ್ನಡೆಯುತ್ತಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ತಿಳಿಸಿದ್ದಾರೆ. ರಾಜಸ್ತಾನ ಉದಮ್ ಪುರದ ಕೋಟದಲ್ಲಿನ ವನವಾಸಿ ಕಲ್ಯಾಣ ಆಶ್ರಮದಲ್ಲಿ ಭಗವಾನ್ ಬಿರ್ಸಾ ಮುಂಡಾ ಅವರ ೧೫೦ನೇ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು, ಬದಲಾಗುತ್ತಿರುವ ಭಾರತ ಆರ್ಥಿಕವಾಗಿ ಮುನ್ನಡೆಯುತ್ತಿದ್ದು, ಜಗತ್ತಿನ ಬಲಿಷ್ಠ ರಾಷ್ಟ್ರವಾಗಿ ವಿಕಾಸಗೊಳ್ಳುತ್ತಿದೆ. ಜಗತ್ತಿನಲ್ಲೇ ೫ನೇ ಅತಿದೊಡ್ಡ ಆರ್ಥಿಕ ರಾಷ್ಟ್ರವಾಗಿರುವ ಭಾರತ ಕೆಲವೇ ವರ್ಷಗಳಲ್ಲಿ ೩ನೇ ಸ್ಥಾನಕ್ಕೆ ಏರಲಿದೆ. ದೇಶದ ಆರ್ಥಿಕತೆಯು ವೇಗವಾಗಿ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ ಅಭಿವೃದ್ಧಿ ಕೆಲಸ ಕಾರ್ಯಗಳಿಗೆ ಹಣದ ಕೊರತೆ ಇಲ್ಲ ಎಂದು ಹೇಳಿದರು. ಯುವಜನತೆ ಶಿಕ್ಷಣಕ್ಕೆ ಒತ್ತು ನೀಡಿದಾಗ ಭಾರತ, ಸಹಜವಾಗಿ ಬದಲಾಗಲಿದೆ. ಈ ನಿಟ್ಟಿನಲ್ಲಿ ಮಕ್ಕಳು ಗಮನಹರಿಸುವ ಅಗತ್ಯವಿದೆ ಎಂದು ತಿಳಿಸಿದರು. ಬಿರ್ಸಾ ಮುಂಡಾ ಅವರ ಜನ್ಮದಿನವನ್ನು ರಾಷ್ಟ್ರೀಯ ಜನಜಾತಿ ಗೌರವದಿನವಾಗಿ ಆಚರಿಸಲಾಗುತ್ತಿರುವುದು ಅಭಿನಂದನಾರ್ಹ ವಿಷಯ. ಬುಡಕಟ್ಟು ಸಮುದಾಯದ ಅಭ್ಯುದಯಕ್ಕೆ ಕೇಂದ್ರವು ಹಲವು

ಯೋಜನೆಗಳನ್ನು ರೂಪಿಸಿ, ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿದೆ. ಬುಡಕಟ್ಟು ಸಮುದಾಯದ ಕಲೆ, ಸಂಗೀತ, ಪ್ರತಿಭೆಯನ್ನು ಪ್ರೋತ್ಸಾಹಿಸುವ ಕೆಲಸ ಮಾಡಲಾಗುತ್ತಿದೆ. ಸಾಂಸ್ಕೃತಿಕ ಪರಂಪರೆ ದೇಶದ ಬುನಾದಿ. ಅದು ಅಲುಗಾಡಿದರೆ ಯಾವುದು ಸುರಕ್ಷಿತವಲ್ಲ. ಈ ನಿಟ್ಟಿನಲ್ಲಿ ಪರಂಪರೆಯನ್ನು ಭದ್ರವಾಗಿಸುವ ಕೆಲಸವಾಗಬೇಕಿದೆ ಎಂದು ಹೇಳಿದರು.

**<><*<><>*><>**

ಎಲೋನ್ ಮಸ್ಕ್ ಅವರ ಬಾಹ್ಯಾಕಾಶ ಸಂಸ್ಥೆ- ಸ್ಪೇಸ್ ಎಕ್ಸ್ ಬರುವ ಮಂಗಳವಾರ ಅಮೆರಿಕಾದ ಕೇಪ್ ಕೆನವೆರಲ್‌ನಿಂದ ಭಾರತದ ಭಾರೀ ತೂಕದ ಸಂವಹನ ಉಪಗ್ರಹ ಜಿಸ್ಯಾಟ್-೨೦ ಅನ್ನು ಉಡಾವಣೆ ಮಾಡಲಿದೆ. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷ ಎಸ್.ಸೋಮನಾಥ್ ಅವರು, ಈ ಮಾಹಿತಿ ನೀಡಿದ್ದು, ಸ್ಪೇಸ್ ಎಕ್ಸ್‌ನ ಫಾಲ್ಕಾನ್ ೯, ಇಸ್ರೋದ ಜಿಸ್ಯಾಟ್-೨೦ ಅನ್ನು ಇದೇ ೧೯ ರಂದು ಉಡಾವಣೆ ನಡೆಸಲಿದೆ ಎಂದು ಅವರು ವಿವರಿಸಿದ್ದಾರೆ. ಉಪಗ್ರಹವು ೧೪ ವರ್ಷಗಳವರೆಗೆ ಕಾರ್ಯಾಚರಣೆ ನಡೆಸುವ ನಿರೀಕ್ಷೆಯಿದೆ. ಇದು ಭಾರತದ ಮೂಲೆ ಮೂಲೆಯ ಪ್ರದೇಶಗಳಿಗೆ ಇಂಟರ್ನೆಟ್ ಸೇರಿದಂತೆ ಪ್ರಮುಖ ಸೇವೆಗಳನ್ನು ಒದಗಿಸಲಿದೆ. ೪ ಸಾವಿರದ ೭೦೦ ಕೆ.ಜಿ ತೂಕದ ಜಿಸ್ಯಾಟ್-೨೦, ಭಾರತದ ಅತ್ಯಂತ ಭಾರವಾದ ಸಂವಹನ ಉಪಗ್ರಹಗಳಲ್ಲಿ ಒಂದಾಗಿದೆ. ಜಿಸ್ಯಾಟ್-೨೦ ಬಾಹುಬಲಿ ಎಂದೇ ಹೆಸರುವಾಸಿಯಾಗಿದ್ದು, ಭಾರೀ ತೂಕದ ಕಾರಣ ಉಡಾವಣೆಗೆ ಸ್ಪೇಸ್ ಎಕ್ಸ್ ಅನ್ನು ಆಯ್ಕೆ ಮಾಡಲಾಗಿದೆ. ಇಸ್ರೋದ ವಾಣಿಜ್ಯ ವಿಭಾಗದ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ರಾಧಾಕೃಷ್ಣನ್ ದುರೈರಾಜ್, ಸ್ಪೇಸ್ ಎಕ್ಸ್‌ನ ಫಾಲ್ಕನ್ ೯ ರಾಕೆಟ್‌ನಲ್ಲಿ ಭಾರೀ ತೂಕದ ಉಪಗ್ರಹವನ್ನು ಉಡಾವಣೆ ಮಾಡಲು ಇಸ್ರೋ ಉತ್ತಮ ಒಪ್ಪಂದ ಮಾಡಿಕೊಂಡಿದೆ ಎಂದು ಹೇಳಿದ್ದಾರೆ. ಭಾರತ ಈವರೆಗೆ ಭಾರೀ ಗಾತ್ರದ ಉಪಗ್ರಹಗಳ ಉಡಾವಣೆಗೆ ಫ್ರೆಂಚ್ ಉಡಾವಣೆ ಸೇವಾ ಪೂರೈಕೆದಾರ ಏರಿಯಲ್ ಸ್ಪೇಸ್ ಅನ್ನು ಅವಲಂಬಿಸಿತ್ತು.

ಪ್ರಸ್ತುತ ಅದು ಯಾವುದೇ ಕಾರ್ಯಾಚರಣೆಯ ರಾಕೆಟ್‌ಗಳನ್ನು ಹೊಂದಿಲ್ಲದ ಕಾರಣ ಭಾರತ ಸ್ಪೇಸ್ ಎಕ್ಸ್‌ನೊಂದಿಗೆ ಹೋಗಿರುವುದು ವಿಶ್ವಾಸಾರ್ಹ ಆಯ್ಕೆಯಾಗಿದೆ. ಸ್ಪೇಸ್ ಎಕ್ಸ್‌ನ ಭಾರೀ ಗಾತ್ರದ ಉಪಗ್ರಹಗಳನ್ನು ಹೊತ್ತೊಯ್ಯಬಲ್ಲ ಫಾಲ್ಕಾನ್ ೯ ರಾಕೆಟ್ ೮ ಸಾವಿರದ ೩೦೦ ಕೆ.ಜಿ ಅಥವಾ ೮.೩ ಟನ್‌ಗಳಷ್ಟು ತೂಕದ ಪೇಲೋಡ್‌ಗಳನ್ನು ಭೂಸ್ಥಿರ ಕಕ್ಷೆಗೆ ಇಳಿಸುವ ಸಾಮರ್ಥ್ಯ ಹೊಂದಿದೆ.

**<><*<><>*><>**

ಕರ್ನಾಟಕದ ಐಟಿ-ಬಿಟಿ ಇಲಾಖೆ ವತಿಯಿಂದ ಇದೇ ೧೯ರಿಂದ ೨೧ರವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ '೨೭ನೇ ಬೆಂಗಳೂರು ಟೆಕ್ ಶೃಂಗ' ಆಯೋಜಿಸಲಾಗಿದೆ ಎಂದು ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಬೆಂಗಳೂರಿನಲ್ಲಿ ನಿನ್ನೆ ತಿಳಿಸಿದ್ದಾರೆ. ಶೃಂಗಸಭೆಯಲ್ಲಿ ನವೋದ್ಯಮಗಳ ಅಭಿವೃದ್ಧಿಯನ್ನು ಗುರಿಯಾಗಿಸಿಕೊಂಡು, ಜಾಗತಿಕ ಪಾಲುದಾರಿಕೆಗೆ ಆದ್ಯತೆ ನೀಡಲಾಗುತ್ತಿದೆ. ತಾಂತ್ರಿಕ ಉತ್ಕೃಷ್ಟತೆ, ನಾವೀನ್ಯತೆ ಮತ್ತು ಬೆಳವಣಿಗೆಯಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ. ನವೋದ್ಯಮಗಳ ಬೆಳವಣಿಗೆ ಮೂಲಕ ರಾಜ್ಯದ ಹಿರಿಮೆ ಹೆಚ್ಚಿಸಲು ಈ ಶೃಂಗವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು. ಇದೇ ೧೯ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶೃಂಗಸಭೆಯನ್ನು ಉದ್ಘಾಟಿಸಲಿದ್ದು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ದೇಶ-ವಿದೇಶಗಳ ಐಟಿ ಉದ್ಯಮದ ಪ್ರಮುಖರು

ಭಾಗಿಯಾಗಲಿದ್ದಾರೆ ಎಂದು ಅವರು ತಿಳಿಸಿದರು. ಈ ಬಾರಿ ೩೦೦ಕ್ಕೂ ಹೆಚ್ಚು ನವೋದ್ಯಮಗಳು ಮತ್ತು ೧೦೦ ಮಂದಿ ಹೂಡಿಕೆದಾರರನ್ನು ಗುರುತಿಸಲಾಗಿದೆ. ಈ ಇಬ್ಬರ ಮುಖಾಮುಖಿ ಸೇರಿದಂತೆ ನವೋದ್ಯಮ ಬೆಳವಣಿಗೆಗೆ ಅನುಸರಿಸಬೇಕಾದ ಕ್ರಮಗಳ ಕುರಿತು ಚರ್ಚೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

**<><*<><>*><>**

ಮಣಿಪುರದಲ್ಲಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ಮರು ಸ್ಥಾಪಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಭದ್ರತಾ ಪಡೆಗಳಿಗೆ ಸೂಚಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ಕೆಲವು ದಿನಗಳಿಂದ ಮಣಿಪುರದಲ್ಲಿ ಭದ್ರತಾ ಪರಿಸ್ಥಿತಿ ದುರ್ಬಲವಾಗಿದೆ. ಸಂಘರ್ಷದಲ್ಲಿರುವ ಎರಡು ಸಮುದಾಯಗಳ ಶಸ್ತ್ರಸಜ್ಜಿತ ದುಷ್ಕರ್ಮಿಗಳು ಹಿಂಸಾಚಾರದಲ್ಲಿ ತೊಡಗಿದ್ದಾರೆ. ಇದು ಜೀವ ಹಾನಿಗೆ ಮತ್ತು ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆಗೆ ಅಡ್ಡಿಪಡಿಸುತ್ತದೆ. ಹಿಂಸಾಚಾರದಲ್ಲಿ ತೊಡಗಿರುವವರ ವಿರುದ್ಧ ಕಠಿಣಕ್ರಮ ಕೈಗೊಳ್ಳಲಾಗುವುದು. ಪರಿಣಾಮಕಾರಿ ತನಿಖೆಗಾಗಿ ಪ್ರಮುಖ ಪ್ರಕರಣಗಳನ್ನು ರಾಷ್ಟ್ರೀಯ ತನಿಖಾ ದಳ- ಎನ್‌ಐಎ ಗೆ ಹಸ್ತಾಂತರಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

**<><*<><>*><>**

ಬಿಹಾರದ ರಾಜ್‌ಗಿರ್‌ನಲ್ಲಿ ನಡೆಯುತ್ತಿರುವ ಮಹಿಳಾ ಏಷ್ಯನ್ ಹಾಕಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಇಂದು ಭಾರತ ತಂಡ ಜಪಾನ್ ವಿರುದ್ಧ ಸೆಣಸಲಿದೆ. ಪಂದ್ಯ ಸಂಜೆ ೪.೪೫ ಕ್ಕೆ ಆರಂಭವಾಗಲಿದೆ. ಮಹಿಳೆಯರ ಏಷ್ಯನ್ ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾರತ ತನ್ನ ಅಜೇಯ ಓಟವನ್ನು ಮುಂದುವರಿಸಿದೆ. ನಿನ್ನೆ ನಡೆದ ನಾಲ್ಕನೇ ಪಂದ್ಯದಲ್ಲಿ ಭಾರತ ತಂಡವು ಚೀನಾವನ್ನು ೩-೦ ಗೋಲುಗಳಿಂದ ಸೋಲಿಸಿದೆ. ಸತತ ನಾಲ್ಕು ಗೆಲುವಿನೊಂದಿಗೆ ಭಾರತವು ಪಂದ್ಯಾವಳಿಯಲ್ಲಿ ಅಗ್ರಸ್ಥಾನದಲ್ಲಿರುವ ಚೀನಾವನ್ನು ಹಿಂದಿಕ್ಕಿದೆ. ಸಂಗೀತಾ, ಸಲೀಮಾ ಮತ್ತು ದೀಪಿಕಾ ಅವರ ಗೋಲುಗಳು ಭಾರತದ ಗೆಲುವಿಗೆ ನೆರವಾದವು. ಈ ನಡುವೆ ಜಪಾನ್ ತನ್ನ ಹಿಂದಿನ ಪಂದ್ಯದಲ್ಲಿ ಮಲೇಷಿಯಾವನ್ನು ೨-೧ ಗೋಲುಗಳಿಂದ ಸೋಲಿಸಿದ ನಂತರ ಏಷ್ಯನ್ ಚಾಂಪಿಯನ್ಸ್ ಟ್ರೋಫಿಯ ಮೊದಲ ಜಯವನ್ನು ದಾಖಲಿಸಿದೆ. ಕೊರಿಯಾ ಮತ್ತು ಥಾಯ್ಲೆಂಡ್ ವಿರುದ್ಧ ಪಂದ್ಯಗಳನ್ನು ಡ್ರಾ ಮಾಡಿಕೊಂಡಿತ್ತು. ಆದರೆ ಚೀನಾದ ವಿರುದ್ಧ ಪರಾಭವಗೊಂಡಿತ್ತು.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧೨ ಕ್ಕೆ **<>*><>**